ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ ಎಸ್‌ಪಿಎಸ್ 01 2015

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:04-08-2017.

## ಸುತ್ತೋಲೆ

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಕಾಲೇಜುಗಳಲ್ಲಿ ಸಿ.ಸಿ.ಟಿವಿ ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ.

ಉಲ್ಲೇಖ
1) ಈ ಕಛೇರಿಯ ಸುತ್ತೋಲೆ ಸಂಖ್ಯೆ: ಡಿಟಿಇ 01 ಎಸ್‌ಪಿಎಸ್(1) 2015 ದಿನಾಂಕ:18/08/2015
2) ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಕಾಲೇಜು ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯ ಬೆಂಗಳೂರು ಇವರ ಪತ್ರ ಸಂಖ್ಯೆ: ಇಡಿ 03 ಯುಪಿಸಿ 2017 ಬೆಂಗಳೂರು ದಿ:28/29-07-2017.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಈ ಕಛೇರಿಯ ಸುತ್ತೋಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು, ಮತ್ತು ಕಿರಿಯ ತಾಂತ್ರಿಕ ಶಾಲೆಗಳಲ್ಲಿ ತಾಂತ್ರಿಕ ಸಲಹಾ ಸಮಿತಿಯು ನಿಗದಿ ಪಡಿಸಿದ ಸ್ಪೇಸಿಫಿಕೆಷನ್‌ಗಳುಳ್ಳ ವೆಬ್ ಆಧಾರಿತ ಬಯೋಮೆಟ್ರಿಕ್ ಮತ್ತು ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲು ತಿಳಿಸಲಾಗಿತ್ತು, ಇದರಂತೆ ಹಲವಾರು ಸಂಸ್ಥೆಗಳು ಸದರಿ ಸೌಲಭ್ಯವನ್ನು ಅಳವಡಿಸಿಕೊಂಡಿರುತ್ತಾರೆ.

ಉಲ್ಲೇಖ (2) ರಲ್ಲಿ ತಿಳಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು, ಮತ್ತು ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಸುರಕ್ಷತೆಯ ದೃಷ್ಟಿಯಿಂದ ಸಿ.ಸಿ. ಟಿವಿ ಕ್ಯಾಮರಾಗಳನ್ನು ಮತ್ತು ತುರ್ತು ಸಮಯದಲ್ಲಿ ಉಪಯೋಗಿಸಲು ಅಗ್ನಿಶಾಮಕ ಉಪಕರಣಗಳನ್ನು ಲಭ್ಯವಿರುವ ಸರ್ಕಾರದ ಅನುಮೋದಿತ ಎಸ್.ಆರ್. ದರಪಟ್ಟಿಯ 2016-17 ರಂತೆ ಖರೀದಿಸಲು ನಿಯಾಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸರ್ಕಾರದಿಂದ ತಿಳಿಸಲಾಗಿದೆ.

ಆದುದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ಸುರಕ್ಷತೆಯ ದೃಷ್ಟಿಯಿಂದ ಸಿ.ಸಿ. ಟಿವಿ ಕ್ಯಾಮರಾಗಳನ್ನು ಮತ್ತು ತುರ್ತು ಸಮಯದಲ್ಲಿ ಉಪಯೋಗಿಸಲು ಅಗ್ನಿಶಾಮಕ ಉಪಕರಣಗಳನ್ನು ಅಳವಡಿಸಿಕೊಳ್ಳದ ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು, ಮತ್ತು ಕಿರಿಯ ತಾಂತ್ರಿಕ ಶಾಲೆಗಳು ತಾಂತ್ರಿಕ ಸಲಹಾ ಸಮಿತಿಯು ನಿಗದಿ ಪಡಿಸಿದ ಸ್ಪೇಸಿಫಿಕೆಷನ್‌ಗಳುಳ್ಳ ಸಿಸಿಟಿವಿ ಕ್ಯಾಮರಾಗಳನ್ನು ಮತ್ತು ತುರ್ತು ಸಮಯದಲ್ಲಿ ಉಪಯೋಗಿಸಲು ಅಗ್ನಿಶಾಮಕ ಉಪಕರಣಗಳನ್ನು ತಮ್ಮ ಸಂಸ್ಥೆಗಳ ಲಭ್ಯವಿರುವ ಅನುದಾನದಲ್ಲಿ ಕೆ.ಟಿ.ಪಿ.ಪಿ ನಿಯಮಾನುಸಾರ ಖರೀದಿಸಿ ಅಳವಡಿಸಿಕೊಳ್ಳಲು ಮತ್ತೊಮ್ಮೆ ಸೂಚಿಸಲಾಗಿದೆ.

ನಿರ್ದೇಶಕರು

ಇವರಿಗೆ:

ಈ ಇಲಾಖೆಯಲ್ಲಿ ಬರುವ ಸರ್ಕಾರಿ ಮತ್ತು ಅನುದಾನಿತ ಇಂಜಿನಿಯರಿಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು, ಮತ್ತು ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಲರುಗಳಿಗೆ

ಪ್ರತಿ:- ಇ-ಆಡಳಿತ ವಿಭಾಗಕ್ಕೆ -ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.